All India Radio: Bangalore
Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

13.05.2026 6.40 p.m.

***************

ಮುಖ್ಯಾಂಶಗಳು

- ಸೂರ್ಯಕಾಂತಿ ಹತ್ತಿ, ತೊಗರಿ ಸೇರಿದಂತೆ ೧೪ ಮುಂಗಾರು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಲು ಕೇಂದ್ರ ಸಂಪುಟ ನಿರ್ಧಾರ
- ಡಿಜಿಲಾಕರ್ ಅನುಷ್ಠಾನದಲ್ಲಿ ರಾಜ್ಯಕ್ಕೆ ಅಗ್ರಸ್ಥಾನ ; ಕೇಂದ್ರ ಸರ್ಕಾರದಿಂದ ರಾಷ್ಟ್ರೀಯ ಪ್ರಶಸ್ತಿ
- ಇದೇ ೧೬ರಿಂದ ಬೆಂಗಳೂರಿನಲ್ಲಿ ಭೂ-ಗ್ಯಾರಂಟಿ ಯೋಜನೆಯಡಿ 'ನನ್ನ ಖಾತಾ ನನ್ನ ಹಕ್ಕು' ಅಭಿಯಾನ
- ಪರಿಶಿಷ್ಟರ ಮೀಸಲಾತಿ ಪ್ರಮಾಣ ಹೆಚ್ಚಿಸುವಂತೆ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಆಗ್ರಹ
- ರಾಜ್ಯದ ಹಲವೆಡೆ ಇಂದು ಗುಡುಗು, ಮಿಂಚು, ಬಿರುಗಾಳಿ ಸಹಿತ ಮಳೆ ; ಹವಾಮಾನ ಇಲಾಖೆ ಮುನ್ನೆಚ್ಚರಿಕೆ

---

೨೦೨೬-೨೭ರ ಮಾರುಕಟ್ಟೆ ಋತುವಿನಲ್ಲಿ ೧೪ ಮುಂಗಾರು ಬೆಳೆಗಳಿಗೆ ಕನಿಷ್ಠ ಬೆಂಬಲ ಬೆಲೆ ಹೆಚ್ಚಿಸಲು ಕೇಂದ್ರ ಸಚಿವ ಸಂಪುಟ ಸಭೆ ಅನುಮೋದನೆ ನೀಡಿದೆ. ಈ ಋತುವಿನಲ್ಲಿ ಅಂದಾಜು ೮೨೪ ಲಕ್ಷ ಮೆಟ್ರಿಕ್ ಟನ್ ಬೆಳೆಗಳನ್ನು ಖರೀದಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಕೇಂದ್ರ ಸಚಿವ ಅಶ್ವಿನಿ ವೈಷ್ಣವ್, ರೈತರಿಗೆ ಅಂದಾಜು ೨ ಲಕ್ಷದ ೬೦ ಸಾವಿರ ಕೋಟಿ ರೂಪಾಯಿ ಪಾವತಿ ಮಾಡಲಾಗುತ್ತದೆ. ಈ ಋತುವಿನಲ್ಲಿ ಅಂದಾಜು ೮೨೪ ಲಕ್ಷ ಮೆಟ್ರಿಕ್ ಟನ್ ಬೆಳೆಗಳನ್ನು ಖರೀದಿಸಲಾಗುವುದು ಎಂದು ಹೇಳಿದ್ದಾರೆ.

ಸೂರ್ಯಕಾಂತಿ ಬೀಜವು ಕ್ವಿಂಟಾಲ್‌ಗೆ ೬೨೨ ರೂಪಾಯಿ ಹೆಚ್ಚಳ ಕಂಡಿದ್ದು, ಕನಿಷ್ಠ ಬೆಂಬಲ ಬೆಲೆ ೮ ಸಾವಿರದ ೩೪೩ ರೂಪಾಯಿ ತಲುಪಿದೆ. ಹತ್ತಿ ಕ್ವಿಂಟಾಲ್‌ಗೆ ೫೫೭ ರೂಪಾಯಿ ಮತ್ತು ಎಳ್ಳಿಗೆ ಕ್ವಿಂಟಾಲ್‌ಗೆ ೫೦೦ ರೂಪಾಯಿಗಳ ಹೆಚ್ಚಳವನ್ನು ಶಿಫಾರಸ್ಸು ಮಾಡಲಾಗಿದೆ. ಎ ದರ್ಜೆಯ ಭತ್ತಕ್ಕೆ ಕ್ವಿಂಟಾಲ್‌ಗೆ ೨ ಸಾವಿರದ ೪೬೧ ರೂಪಾಯಿ, ಜೋಳ ಹೈಬ್ರಿಡ್ ಕ್ವಿಂಟಾಲ್‌ಗೆ ೪ ಸಾವಿರದ ೨೩

ರೂಪಾಯಿ, ತೊಗರಿ ಬೆಳೆಗೆ ಕ್ವಿಂಟಾಲ್‌ಗೆ ೮ ಸಾವಿರದ ೪೫೦ ರೂಪಾಯಿ, ಕನಿಷ್ಠ ಬೆಂಬಲ ಬೆಲೆ ಶಿಫಾರಸ್ಸು ಮಾಡಲಾಗಿದೆ.

---

ಡಿಜಿಟಲ್ ಇಂಡಿಯಾ ಅಭಿಯಾನದಡಿ ಸಾರ್ವಜನಿಕ ಸೇವೆಗಳನ್ನು ಸರಳಗೊಳಿಸುವಲ್ಲಿ ರಾಜ್ಯ ಮತ್ತೊಂದು ಮೈಲಿಗಲ್ಲು ಸ್ಥಾಪಿಸಿದೆ. ಡಿಜಿ ಲಾಕರ್ ಏಕೀಕರಣ ಮತ್ತು ಅನುಷ್ಠಾನದಲ್ಲಿ ಅತ್ಯುತ್ತಮ ಪ್ರಗತಿ ಸಾಧಿಸಿದ ಹಿನ್ನೆಲೆಯಲ್ಲಿ ರಾಷ್ಟ್ರೀಯ ಪ್ರಶಸ್ತಿ ಲಭಿಸಿದೆ.

ಮೇ ೧೧ರಂದು ನವದೆಹಲಿಯಲ್ಲಿ ನಡೆದ ರಾಷ್ಟ್ರೀಯ ಸಮಾಲೋಚನಾ ಕಾರ್ಯಗಾರದಲ್ಲಿ ಈ ಗೌರವ ನೀಡಲಾಗಿದೆ. ದೇಶದಲ್ಲೇ ಅತಿಹೆಚ್ಚು ಡಿಜಿ ಲಾಕರ್ ಖಾತೆಗಳನ್ನು ಹೊಂದಿರುವ ರಾಜ್ಯಗಳಲ್ಲಿ ಕರ್ನಾಟಕ ಮುಂಚೂಣಿಯಲ್ಲಿದೆ. ರಾಜ್ಯದ ಸುಮಾರು ೨ ಕೋಟಿ ೭ ಲಕ್ಷಕ್ಕೂ ಹೆಚ್ಚು ನಾಗರಿಕರು ಡಿಜಿ ಲಾಕರ್ ಸೇವೆಗಳನ್ನು ಬಳಸುತ್ತಿದ್ದಾರೆ. ರಾಜ್ಯ ಸರ್ಕಾರದ ಶೇಕಡ ೭೩ರಷ್ಟು ಈ ಸೇವೆಗಳನ್ನು ಈಗಾಗಲೇ ಡಿಜಿ ಲಾಕರ್ ನೊಂದಿಗೆ ಯಶಸ್ವಿಯಾಗಿ ಸಂಯೋಜಿಸಲಾಗಿದೆ.

ರಾಜ್ಯದಲ್ಲಿ ಸುಮಾರು ೩ ಕೋಟಿ ವಿದ್ಯುತ್ ಬಿಲ್ ದಾಖಲೆಗಳು ಡಿಜಿಟಲ್ ರೂಪದಲ್ಲಿ ಲಭ್ಯವಾಗುತ್ತಿದೆ.

---

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ೫ ನಗರ ಪಾಲಿಕೆಗಳಿಗೆ ಭೂ ಗ್ಯಾರಂಟಿ ಯೋಜನೆಯ ಅಡಿ ಇ-ಖಾತಾ ಅಭಿಯಾನ ಹಮ್ಮಿಕೊಳ್ಳಲಾಗುತ್ತಿದೆ ಎಂದು ಬೆಂಗಳೂರು ನಗರ ಅಭಿವೃದ್ಧಿ ಸಚಿವರೂ ಆಗಿರುವ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದೇ ೧೬ರಿಂದ ಬೆಂಗಳೂರಿನ ೫೦ ಸ್ಥಳಗಳಲ್ಲಿ ನನ್ನ ಖಾತಾ ನನ್ನ ಹಕ್ಕು ಅಭಿಯಾನ ಆರಂಭಿಸಲಾಗುತ್ತಿದೆ. ಅಧಿಕಾರಿಗಳು ಜನರ ಮನೆಬಾಗಿಲಿಗೆ ೨೩ ಲಕ್ಷಕ್ಕೂ ಅಧಿಕ ಆಸ್ತಿಗಳ ಮುದ್ರಿತ ಇ-ಖಾತೆಗಳನ್ನು ತಲುಪಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

ಸಂಚಾರ ವ್ಯವಸ್ಥೆ ಸರಳೀಕರಣಕ್ಕಾಗಿ ಬೆಂಗಳೂರಿನಲ್ಲಿ ಹಲವು ಕಡೆ ವೈಟ್ ಟ್ಯಾಪಿಂಗ್ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ೪೫ ಸಾವಿರ ಕೋಟಿ ರೂಪಾಯಿಗಳ ವೆಚ್ಚದಲ್ಲಿ ಎರಡು ಸುರಂಗ ಮಾರ್ಗಗಳನ್ನು ನಿರ್ಮಾಣ ಮಾಡಲಾಗುತ್ತದೆ ಎಂದು ತಿಳಿಸಿದ್ದಾರೆ.

---

ಅಂತಾರಾಷ್ಟ್ರೀಯ ಯೋಗ ದಿನಾಚರಣೆಯ ಹಿನ್ನೆಲೆಯಲ್ಲಿ ಆರೋಗ್ಯ, ಜ್ಞಾನ ಮತ್ತು ವಿಶ್ವಶಾಂತಿಗಾಗಿ ಯೋಗ ಎಂಬ ಧ್ಯೇಯವಾಕ್ಯದೊಂದಿಗೆ ಯೋಗ ದಿನ ಆಚರಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೂನ್ ೨೧ರಂದು ಬೆಂಗಳೂರಿನ ವಿಧಾನಸೌಧ ಆವರಣದಲ್ಲಿ ಕಾರ್ಯಕ್ರಮ ಆಯೋಜಿಸಲಾಗುವುದು ಎಂದು ಹೇಳಿದ್ದಾರೆ.

'ಪ್ರತಿ ಮನೆಯಲ್ಲೂ ಯೋಗ, ಎಲ್ಲರಿಗೂ ಯೋಗ' ಎಂಬ ವಿಶಾಲ ದೃಷ್ಟಿ ಕೋನದೊಂದಿಗೆ ರಾಜ್ಯ ಸರ್ಕಾರ ಈ ವರ್ಷ ಯೋಗ ದಿನ ಆಚರಿಸಲಿದೆ. ಸುಮಾರು ೫ ಸಾವಿರ ಯೋಗ ಪಟುಗಳು ಕಾರ್ಯಕ್ರಮದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ತಿಳಿಸಿದ್ದಾರೆ.

---

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ವ್ಯಾಪ್ತಿಯ ಪಾಲಿಕೆಗಳ ಚುನಾವಣೆ ನ್ಯಾಯಾಲಯದ ನಿರ್ದೇಶನದಂತೆ ನಡೆಯಲಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಶ್ನೆ ಪತ್ರಿಕೆ ಸೋರಿಕೆಯಿಂದ ನೀಟ್ ಪರೀಕ್ಷೆ ರದ್ದಾಗಿರುವ ಕುರಿತಂತೆ ಪ್ರತಿಕ್ರಿಯಿಸಿ, ಇದಕ್ಕೆ ಕೇಂದ್ರ ಸಚಿವರು ಹಾಗೂ ಸಂಸದರು ಉತ್ತರಿಸಬೇಕು ಎಂದು ಆಗ್ರಹಿಸಿದ್ದಾರೆ.

ಕಷ್ಟಪಟ್ಟು ಓದಿದ್ದ ವಿದ್ಯಾರ್ಥಿಗಳು ಹಾಗೂ ಪೋಷಕರು ಅಸಮಧಾನಗೊಂಡಿದ್ದಾರೆ ಎಂದು ಹೇಳಿದ್ದಾರೆ.

---

ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಮೀಸಲಾತಿ ಪ್ರಮಾಣವನ್ನು ಕೂಡಲೇ ಹೆಚ್ಚಿಸುವಂತೆ ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೀಸಲಾತಿ ಹೆಚ್ಚಿಸದಿದ್ದರೆ, ಮುಂಬರುವ ದಿನಗಳಲ್ಲಿ ರಾಜ್ಯದಲ್ಲಿ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ.

ಛತ್ತೀಸ್‌ಗಢದಲ್ಲಿ ಶೇಕಡ ೫೮ರಷ್ಟು ಮೀಸಲಾತಿ ನೀಡಿದ್ದು, ಇದು ಜನಸಂಖ್ಯಾ ಆಧಾರಿತ ಎಂದು ಗಮನ ಸೆಳೆದರು. ಹೆಚ್ಚುವರಿ ಮೀಸಲಾತಿ ಪ್ರಮಾಣವನ್ನು ಕಾಂಗ್ರೆಸ್ ಸರ್ಕಾರ ತಡೆ ಹಿಡಿದಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

---

ಕಳೆದ ಮೂರು ವರ್ಷಗಳಿಂದ ಸರ್ಕಾರ ಜನರಿಗೆ ಉತ್ತಮ ಆರೋಗ್ಯ ಸೇವೆಯನ್ನು ನೀಡುತ್ತಿದೆ ಎಂದು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವ ಹಾಗೂ ಕೃಷಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದ್ದಾರೆ.

ಮಂಡ್ಯ ಜಿಲ್ಲಾ ಆಸ್ಪತ್ರೆಯಲ್ಲಿ ನೂತನವಾಗಿ ಸ್ಥಾಪಿಸಿರುವ ಆರೈಕೆ ಘಟಕ ಮತ್ತು ತಾಯಿ ಹಾಲು ಸಂಗ್ರಹಣಾ ಕೇಂದ್ರ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಅವರು, ತಾಯಿ ಮಗುವಿನ ಆರೋಗ್ಯ ಕಾಪಾಡುವುದು ಮುಖ್ಯವಾಗಿದೆ. ಆರೋಗ್ಯ ಕ್ಷೇತ್ರದಲ್ಲಿ ಶಿಶು ಸಂಜೀವಿನಿ ಯೋಜನೆ ಮಹತ್ವದಾಗಿದೆ ಎಂದು ಹೇಳಿದ್ದಾರೆ.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆರೋಗ್ಯ ಇಲಾಖೆ ಮುತುವರ್ಜಿ ವಹಿಸಿ ಜಿಲ್ಲೆಯಲ್ಲಿ ತಾಯಿ ಎದೆ ಹಾಲು ಸಂಗ್ರಹ ಘಟಕವನ್ನು ಆರಂಭಿಸಿರುವುದು ಶ್ಲಾಘನೀಯ ಎಂದು ತಿಳಿಸಿದ್ದಾರೆ.

---

ಗದಗ ಜಿಲ್ಲೆಯ ರೈತರಿಂದ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿ ಹುಟ್ಟುವಳಿಯನ್ನು ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ ತಿಳಿಸಿದ್ದಾರೆ.

ಪ್ರತಿ ರೈತರಿಂದ ಪ್ರತಿ ಎಕರೆಗೆ ೪ ಕ್ವಿಂಟಲ್‌ನಂತೆ ಗರಿಷ್ಟ ೨೦ ಕ್ವಿಂಟಲ್ ಎಫ್.ಎ.ಕ್ಯೂ ಗುಣಮಟ್ಟದ ಸೂರ್ಯಕಾಂತಿಗೆ ಪ್ರತಿ ಕ್ವಿಂಟಲ್ ಗೆ ೭ ಸಾವಿರದ ೭೨೧ ರೂಪಾಯಿಗಳ ಬೆಂಬಲ ಬೆಲೆಯನ್ನು ಸರ್ಕಾರ ನಿಗದಿ ಗೊಳಿಸಿ ಆದೇಶ ಹೊರಡಿಸಿದೆ ಎಂದು ತಿಳಿಸಿದ್ದಾರೆ.

ಗದಗ ಜಿಲ್ಲೆಯಲ್ಲಿ ೧೩ ಸ್ಥಳಗಳಲ್ಲಿ ಖರೀದಿ ಕೇಂದ್ರಗಳನ್ನು ತೆರೆಯಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

---

ಇನ್ನು ಹವಾವರ್ತಮಾನ,

ಕರಾವಳಿ ಕರ್ನಾಟಕದ ಹಲವೆಡೆ ಮತ್ತು ಒಳನಾಡಿನ ಎರಡು ಸ್ಥಳಗಳಲ್ಲಿ ಮಳೆಯಾಗಿದೆ.

ರಾಜ್ಯದ ಉತ್ತರ ಒಳನಾಡು ಜಿಲ್ಲೆಗಳಲ್ಲಿ ನಾಳೆ ಹಾಗೂ ನಾಡಿದ್ದು, ದಕ್ಷಿಣ ಒಳನಾಡು ಜಿಲ್ಲೆಗಳಲ್ಲಿ ನಾಡಿದ್ದು, ಗುಡುಗು, ಮಿಂಚು, ಬಿರುಗಾಳಿ ಸಹಿತ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ನೆಚ್ಚರಿಕೆ ನೀಡಿದೆ.

ಜೊತೆಗೆ ಆಲಿಕಲ್ಲು ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಹಲವು ಜಿಲ್ಲೆಗಳಿಗೆ ಆರೆಂಜ್ ಅಲರ್ಟ್ ನೀಡಲಾಗಿದೆ.

ಬೆಂಗಳೂರಿನಲ್ಲಿ ಭಾಗಶಃ ಮೋಡ ಕವಿತ ವಾತಾವರಣವಿರಲಿದ್ದು, ಹಲವೆಡೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ.

_________ ಮುಕ್ತಾಯ _________